# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1909(2258)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಮುಖ್ಯಮಂತ್ರಿ ಸುವರ್ಣ ಗ್ರಾಮ ಮತ್ತು ಗ್ರಾಮ ವಿಕಾಸ ಯೋಜನೆಗಳ ಬಗ್ಗೆ

(ಅ) ಕಳೆದ 9 ವರ್ಷಗಳಲ್ಲಿ ಮುಖ್ಯಮಂತ್ರಿ ಸುವರ್ಣ ಗ್ರಾಮ ಮತ್ತು ಗ್ರಾಮ ವಿಕಾಸ ಯೋಜನೆಗಳಡಿ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ಮತ್ತು ಗ್ರಾಮವಾರು ವಿವರ ನೀಡುವುದು)

(ಆ) ಈ ಯೋಜನೆಗಳಡಿ ಕೈಗೊಂಡಿರುವ ಎಸ್‌ಸಿಪಿ/ಟಿಎಸ್‌ಪಿ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಯಾವ ಹಂತದಲ್ಲಿವೆ; ಈ ಕಾಮಗರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಈ ಯೋಜನೆಗಳಡಿ ಕೈಗೊಂಡಿರುವ ಹಲವಾರು ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೂ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ದಾಖಲೆಗಳನ್ನು ಸೃಷ್ಟಿಸಿ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು? (ಪ್ರಕರಣವಾರು ವಿವರ ನೀಡುವುದು)